ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ	:	783
ವಿಧಾನ ಪರಿಷತ್ತಿನ ಸದಸ್ಯರ ಹೆಸರು	:	ಶ್ರೀ ಎಸ್.ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	:	10.03.2020
ಉತ್ತರಿಸುವ ಸಚಿವರು	:	ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.

ಕ್ರ. ಸಂ	ಪ್ರಶ್ನೆ	ಉತ್ತರ
ಅ	ರಾಮನಗರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಲ್ಲಿ ಸರ್ವರ್ ಸಮಸ್ಯೆಗಳಿಂದ ಆನ್ ಲೈನ್ ಮುಖಾಂತರ ಪಡಿತರ ಚೀಟಿ ಪಡೆಯಲು ತೊಂದರೆಯಾಗುತ್ತಿದ್ದು, ವರ್ಗಾವಣೆ/ ವಿಳಾಸ /ಬದಲಾವಣೆ/ತಿದ್ದುಪಡಿ ಹೆಸರು ಸೇರ್ಪಡೆ ಮಾಡಲು ಸಾಧ್ಯವಾಗದಿರುವ ಬಗ್ಗೆ ದೂರುಗಳಿದ್ದು, ಈ ಬಗ್ಗೆ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ; (ಮಾಹಿತಿ ನೀಡುವುದು)	ಜನವರಿ 2020ರ ಮಾಹೆಯಲ್ಲಿ ಮಾತ್ರ ಸರ್ವರ್‌ನ ತಾಂತ್ರಿಕ ದೋಷದಿಂದಾಗಿ ಹೊಸ ಪಡಿತರ ಚೀಟಿ ವಿತರಣೆ, ಪಡಿತರ ಚೀಟಿಗಳ ವರ್ಗಾವಣೆ/ವಿಳಾಸ ಬದಲಾವಣೆ/ತಿದ್ದುಪಡಿ, ಹೆಸರು ಸೇರ್ಪಡೆ ಮಾಡಲು ಸಾಧ್ಯವಾಗಿರುವುದಿಲ್ಲ. ಸರ್ವರ್ ಸಮಸ್ಯೆಯನ್ನು ಎನ್‌ಐಸಿ ರವರು ಪರಿಶೀಲಿಸಿ, ಹೆಚ್ಚುವರಿಯಾಗಿ ಸರ್ವರ್ ಒಂದನ್ನು ಅಳವಡಿಸಿದ್ದರಿಂದ ಮತ್ತು ಸರ್ವರ್ ಗಳಿಗೆ ಹೆಚ್ಚುವರಿಯಾಗಿ ಶೇಖರಣಾ ಹಾರ್ಡ್ ಡಿಸ್ಕ್ ಗಳನ್ನು ಅಳವಡಿಸಿದ್ದರಿಂದ ಫೆಬ್ರವರಿ 2020ರ ಮಾಹೆಯಿಂದ ಹೊಸ ಪಡಿತರ ಚೀಟಿ ವಿತರಣೆ, ಪಡಿತರ ಚೀಟಿಗಳ ವರ್ಗಾವಣೆ/ವಿಳಾಸ ಬದಲಾವಣೆ/ತಿದ್ದುಪಡಿ, ಹೆಸರು ಸೇರ್ಪಡೆ ಯಾವುದೇ ತಾಂತ್ರಿಕ ಸಮಸ್ಯೆ ಇರುವುದಿಲ್ಲ.
ಆ	1 ಲೀಟರ್ ಸೀಮೆಎಣ್ಣೆ ವಿತರಿಸಲು ಅವಕಾಶಗಳಿದ್ದು, ಸಮರ್ಪಕವಾದ ಹೆಬ್ಬೆಟ್ಟು ಗುರುತು ಪಡೆದು ತೆಗೆದುಕೊಳ್ಳಲು ಸರಿಯಾದ ವ್ಯವಸ್ಥೆ ಇಲ್ಲದಿರುವುದರಿಂದ ಬಡ-ಸಾರ್ವಜನಿಕರು ವಂಚನೆಗೆ/ತೊಂದರೆಗೆ ಸಿಲುಕುತ್ತಿರುವುದರಿಂದ ಈ ಸಮಸ್ಯೆಗೆ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ?	ಆದ್ಯತಾ (ಬಿಪಿಎಲ್) ಪಡಿತರ ಚೀಟಿ ಹಾಗೂ ಆದ್ಯತೇತರ (ಎಪಿಎಲ್) ಪಡಿತರ ಚೀಟಿದಾರರು ಒಂದು ಲೀಟರ್ ಸೀಮೆ ಎಣ್ಣೆ ಪಡೆಯಲು ನೋಂದಣಿ ಮಾಡಿರುವವರಿಗೆ ಬಯೋಮೆಟ್ರಿಕ್ ನೀಡಿ ಪ್ರತಿ ತಿಂಗಳು ಯಾವುದೇ ಸಮಸ್ಯೆಗಳಿಲ್ಲದೇ ರೂ.35/- ರ ದರದಲ್ಲಿ ಸೀಮೆ ಎಣ್ಣೆ ವಿತರಣೆ ಮಾಡಲಾಗುತ್ತಿದೆ.

ಆನಾಸ 64 ಡಿಆರ್ ಎ 2020 (ಇ-ಆಫೀಸ್)

(ಕೆ.ಗೋಪಾಲಯ್ಯ)
ಆಹಾರ, ನಾಗರಿಕ ಸರಬರಾಜು ಮತ್ತು
ಗ್ರಾಹಕರ ವ್ಯವಹಾರಗಳ ಹಾಗೂ
ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.